## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2026-27ನೇ ಶೈಕ್ಷಣಿಕ ಸಾಲಿಗೆ ಸೀಮಿತವಾಗಿ ಒಂದನೇ ತರಗತಿಗೆ ಮಕ್ಕಳನ್ನು ದಾಖಲಾತಿ ಮಾಡಲು ನಿಗದಿಪಡಿಸಿರುವ ವಯೋಮಿತಿಯನ್ನು ಸಡಿಲಿಸುವ ಬಗ್ಗೆ.

ಓದಲಾಗಿದೆ :

1. ಸರ್ಕಾರದ ಆದೇಶ ಸಂಖ್ಯೆ: ಇಪಿ 260 ಪಿಜಿಸಿ 2021, ದಿನಾಂಕ: 26.07.2022.
2. ಸರ್ಕಾರದ ತಿದ್ದುಪಡಿ ಆದೇಶ ಸಂಖ್ಯೆ: ಇಪಿ 387 ಪಿಜಿಸಿ 2022, ದಿನಾಂಕ: 15.11.2022.
3. ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಕಛೇರಿಯ ಏಕ ಕಡತ ಸಂ: DPI/7/2025-SEC-ADM2(1702355).
4. ಸದಸ್ಯ ಕಾರ್ಯದರ್ಶಿ, ರಾಜ್ಯ ಶಿಕ್ಷಣ ನೀತಿ ಆಯೋಗ ಇವರ ಪತ್ರ ದಿನಾಂಕ:15/3/2025.
5. ಸರ್ಕಾರದ ಆದೇಶ ಸಂಖ್ಯೆ: ಇಪಿ 260 ಪಿಜಿಸಿ 2022, ದಿನಾಂಕ: 16.04.2025.
6. ಕರ್ನಾಟಕ ಶಿಕ್ಷಣ ಅಧಿನಿಯಮ, 1983.

*****

ಪ್ರಸ್ತಾವನೆ :

ಮೇಲೆ ಓದಲಾದ ಕ್ರಮಸಂಖ್ಯೆ (1)ರ ಆದೇಶದಲ್ಲಿ ಶಿಕ್ಷಣ ಹಕ್ಕು ಕಾಯ್ದೆ, 2009 ಮತ್ತು ಕಡ್ಡಾಯ ಶಿಕ್ಷಣ ನಿಯಮಗಳು, 2012ರಂತೆ ಶೈಕ್ಷಣಿಕ ವರ್ಷದ ಜೂನ್ 1ನೇ ತಾರೀಖಿಗೆ ಕಡ್ಡಾಯವಾಗಿ 06 ವರ್ಷಗಳು ಪೂರ್ಣಗೊಂಡಿರುವ ಮಗುವನ್ನು ಒಂದನೇ ತರಗತಿಗೆ ದಾಖಲಿಸಲು ವಯೋಮಿತಿಯನ್ನು ನಿಗದಿಪಡಿಸಿ ಆದೇಶಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮಾಂಕ (2)ರ ತಿದ್ದುಪಡಿ ಆದೇಶದಲ್ಲಿ ಶೈಕ್ಷಣಿಕ ವರ್ಷದ ಜೂನ್ ಒಂದನೇ ತಾರೀಖಿಗೆ ಕಡ್ಡಾಯವಾಗಿ 06 ವರ್ಷಗಳು ಪೂರ್ಣಗೊಂಡಿರುವ ಮಗುವನ್ನು ಒಂದನೇ ತರಗತಿಗೆ ದಾಖಲಿಸಲು ವಯೋಮಿತಿಯನ್ನು ನಿಗದಿಪಡಿಸಿರುವುದನ್ನು 2025-2026ನೇ ಶೈಕ್ಷಣಿಕ ಸಾಲಿನಿಂದ ಅನ್ವಯವಾಗುವಂತೆ ತಿದ್ದುಪಡಿ ಮಾಡಲಾಗಿರುತ್ತದೆ.

ಮೇಲೆ ಓದಲಾದ ಕ್ರಮಾಂಕ (3)ರ ಏಕ ಕಡತದಲ್ಲಿ ಒಂದನೇ ತರಗತಿ ಪ್ರವೇಶಾತಿಗೆ ಪ್ರಸ್ತುತ ನಿಗದಿಪಡಿಸಿರುವ ಕನಿಷ್ಠ 6 ವರ್ಷಗಳ ವಯೋಮಿತಿಯನ್ನು ಸಡಿಲಿಸಲು ರಾಜ್ಯಾದ್ಯಂತ ಪೋಷಕರಿಂದ ಹಲವಾರು ಮನವಿಗಳು ಸ್ವೀಕೃತವಾಗುತ್ತಿದ್ದು, ಒಂದನೇ ತರಗತಿಗೆ 5 ವರ್ಷ 5 ತಿಂಗಳು ವಯೋಮಿತಿಯನ್ನು ಮರು ನಿಗದಿಪಡಿಸಲು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುವ ಮೇರೆಗೆ ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ ಸಲಹೆ ನೀಡುವಂತೆ ರಾಜ್ಯ ಶಿಕ್ಷಣ ನೀತಿ ಆಯೋಗವನ್ನು ಕೋರಲಾಗಿದ್ದು, ಕ್ರಮಾಂಕ (4)ರಲ್ಲಿ ವಯೋಮಿತಿಯನ್ನು ನಿಗದಿಪಡಿಸುವ ಹಾಗೂ ಸಡಿಲಿಸುವ ಅಂಶಗಳಿಗೆ ರಾಜ್ಯ ಶಿಕ್ಷಣ ನೀತಿ ಆಯೋಗವು ಕೆಳಕಂಡಂತೆ ಅಭಿಪ್ರಾಯ ನೀಡಿರುತ್ತದೆ.

> *"ಸಂವಿಧಾನದ ಅನುಚ್ಛೇದ 21(ಎ), ಶಿಕ್ಷಣ ಹಕ್ಕು ಕಾಯ್ದೆ, 2009, ಕಡ್ಡಾಯ ಶಿಕ್ಷಣ ನಿಯಮಗಳು, 2012 ಮತ್ತು ರಾಷ್ಟ್ರೀಯ ಶಿಕ್ಷಣ ನೀತಿ, 2020ರನ್ವಯ 1ನೇ ತರಗತಿಯ ಪ್ರವೇಶಕ್ಕೆ 6(ಆರು) ವರ್ಷಗಳ ಕನಿಷ್ಠ ವಯೋಮಿತಿ ನಿಗದಿಪಡಿಸುವುದು ಅಗತ್ಯ ಮತ್ತು ಔಚಿತ್ಯಪೂರ್ಣ. ಈ ವಿಷಯದಲ್ಲಿ ಅನುಸರಿಸಲಾಗುತ್ತಿರುವ ರಾಷ್ಟ್ರೀಯ ಮತ್ತು ಅಂತರಾಷ್ಟ್ರೀಯ ಪದ್ಧತಿಗಳು ಮಗುವಿನ ಮಾನಸಿಕ ಬೆಳವಣಿಗೆ ಮತ್ತು ಕೇಂದ್ರ ಸರ್ಕಾರ ಮತ್ತು ವಿವಿಧ ರಾಜ್ಯ ಸರ್ಕಾರಗಳು 1ನೇ ತರಗತಿಯ ದಾಖಲಾತಿಗೆ 6 ವರ್ಷಗಳ ಕನಿಷ್ಠ ವಯೋಮಿತಿಯನ್ನು ನಿಗದಿಪಡಿಸಿರುವುದು ಹಾಗೂ ಮಗುವಿನ ಒತ್ತಡ ರಹಿತ ಕಲಿಕೆಗೆ ಪೂರಕವಾಗಿ ರಾಜ್ಯ ಸರ್ಕಾರವು ನಿಗದಿಪಡಿಸಿರುವ 6 ವರ್ಷಗಳ ಕನಿಷ್ಠ ವಯೋಮಿತಿಯು ಸಮರ್ಪಕವಾಗಿರುತ್ತದೆ. ಅಲ್ಲದೇ, ವೈಯಕ್ತಿಕ ತೊಡಕುಗಳನ್ನು ಪರಿಗಣಿಸಿ ಶಿಕ್ಷಣ ನೀತಿಯಲ್ಲಿ ಬದಲಾವಣೆ ಮಾಡಲಾಗದೆಂಬ ಅಂಶವನ್ನು ವಿವಿಧ ನ್ಯಾಯಾಲಯಗಳು ಎತ್ತಿ ಹಿಡಿದಿರುವುದಾಗಿ ತನ್ನ ವರದಿಯಲ್ಲಿ ಸ್ಪಷ್ಟಪಡಿಸಿ, 2025-26ರ ಶೈಕ್ಷಣಿಕ ವರ್ಷಕ್ಕಿಂತ ಪೂರ್ವದಲ್ಲಿ ಪೂರ್ವ ಪ್ರಾಥಮಿಕ ತರಗತಿಗಳನ್ನು ಪೂರ್ಣಗೊಳಿಸಿರುವ ಮಕ್ಕಳ ಶೈಕ್ಷಣಿಕ ಹಿತದೃಷ್ಟಿಯಿಂದ ಈಗಾಗಲೇ ನಿಗದಿಪಡಿಸಿರುವ 6 ವರ್ಷಗಳ ಕನಿಷ್ಠ ವಯೋಮಿತಿಗೆ ವಿನಾಯತಿ ನೀಡಬಹುದೆಂದು ಅಭಿಪ್ರಾಯ ನೀಡಿರುತ್ತದೆ."*

..2..

Kiran Raghuppathi

ಮೇಲೆ ಓದಲಾದ ಕ್ರಮಸಂಖ್ಯೆ (5)ರ ಆದೇಶದನ್ವಯ ದಿನಾಂಕ: 26.07.2022ರ ಆದೇಶದಲ್ಲಿ ನಿಗದಿಪಡಿಸಿರುವ ವಯೋಮಿತಿಯನ್ನು ರಾಜ್ಯ ಶಿಕ್ಷಣ ನೀತಿ ಆಯೋಗವು ಮಾಡಿದ ಶಿಫಾರಸ್ಸಿನ ಮೇರೆಗೆ ಪೂರ್ವ ಪ್ರಾಥಮಿಕ ಶಿಕ್ಷಣವನ್ನು ಪೂರ್ಣಗೊಳಿಸಿರುವ ಹಾಗೂ ಶೈಕ್ಷಣಿಕ ವರ್ಷದ ಜೂನ್ 1ನೇ ದಿನಾಂಕಕ್ಕೆ 5 ವರ್ಷ 5 ತಿಂಗಳು ಪೂರ್ಣಗೊಂಡಿರುವ ಮಕ್ಕಳಿಗೆ ಅನ್ವಯವಾಗುವಂತೆ ಮಾತ್ರ ಒಂದು ಬಾರಿಗೆ 2025-2026ನೇ ಶೈಕ್ಷಣಿಕ ವರ್ಷಕ್ಕೆ ಸೀಮಿತಗೊಳಿಸಿ ಒಂದನೇ ತರಗತಿಗೆ ದಾಖಲು ಮಾಡಿಕೊಳ್ಳಲು ಆದೇಶಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮಸಂಖ್ಯೆ (6)ರ ಅಧಿನಿಯಮದ ಕಲಂ 20ರಲ್ಲಿ ಪ್ರಾಥಮಿಕ ಶಿಕ್ಷಣಕ್ಕೆ ದಾಖಲಾಗುವ ಮಗುವಿನ ವಯಸ್ಸನ್ನು ಲೆಕ್ಕಹಾಕುವ ಬಗ್ಗೆ ಕೆಳಕಂಡಂತೆ ಸ್ಪಷ್ಟಪಡಿಸಲಾಗಿದೆ:

> "ಮಗುವಿನ ವಯಸ್ಸನ್ನು, ಶೈಕ್ಷಣಿಕ ವರ್ಷದ ಪ್ರಾರಂಭದ ದಿನದಂದು ಅಥವಾ ಅದಕ್ಕೆ ಮುಂಚೆ, ಆ ಮಗುವಿಗೆ ತುಂಬುವ ಪೂರ್ಣ ವರ್ಷಗಳನ್ನು ಆಧರಿಸಿ ಲೆಕ್ಕ ಹಾಕತಕ್ಕದ್ದು;
>
> ಪರಂತು, ಮಗುವಿನ ಜನ್ಮ ದಿನವು, ಶೈಕ್ಷಣಿಕ ವರ್ಷದ ಮೊದಲನೇ ದಿನಾಂಕದಿಂದ ಅರವತ್ತು ದಿನಗಳೊಳಗೆ ಬರುವಲ್ಲಿ ಮಗುವಿನ ವಯಸ್ಸನ್ನು ಲೆಕ್ಕ ಹಾಕುವ ಉದ್ದೇಶಕ್ಕಾಗಿ, ಅದರ ಜನ್ಮ ದಿನಾಂಕವು ಶೈಕ್ಷಣಿಕ ವರ್ಷದ ಮೊದಲನೇ ದಿನಾಂಕದಂದು ಬರುವುದಾಗಿ ಭಾವಿಸತಕ್ಕದ್ದು."

ಮೇಲೆ ಓದಲಾದ ಕ್ರಮಸಂಖ್ಯೆ (5)ರ ದಿನಾಂಕ:16.04.2025ರ ಆದೇಶದಲ್ಲಿ ಕಲ್ಪಿಸಿರುವ ವಯೋಮಿತಿಯ ಸಡಿಲಿಕೆಯನ್ನು 2026-27ನೇ ಶೈಕ್ಷಣಿಕ ವರ್ಷಕ್ಕೂ ಮುಂದುವರೆಸುವಂತೆ ಕೋರಿ ರಾಜ್ಯಾದ್ಯಂತ ಶೈಕ್ಷಣಿಕ ವರ್ಷದ ಪ್ರಾರಂಭದ ದಿನಾಂಕಕ್ಕೆ 06 ವರ್ಷಗಳು ಪೂರ್ಣಗೊಳ್ಳದ ಮಕ್ಕಳ ಪೋಷಕರು ಸರ್ಕಾರಕ್ಕೆ ಮನವಿ / ಅಹವಾಲುಗಳನ್ನು ಸಲ್ಲಿಸಿರುವ ಮೇರೆಗೆ ಕರ್ನಾಟಕ ಶಿಕ್ಷಣ ಅಧಿನಿಯಮ, 1983ರ ಕಲಂ 20ರಲ್ಲಿ ಪ್ರಾಥಮಿಕ ಶಿಕ್ಷಣಕ್ಕೆ ದಾಖಲಾಗುವ ಮಗುವಿನ ವಯಸ್ಸನ್ನು ಲೆಕ್ಕಹಾಕಲು ಕಲ್ಪಿಸಿರುವ ಅವಕಾಶದನ್ವಯ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಇಪಿ 54 ಪಿಜಿಸಿ 2026,**
**ಬೆಂಗಳೂರು, ದಿನಾಂಕ:10.04.2026**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ರಾಜ್ಯ ಶಿಕ್ಷಣ ನೀತಿ ಆಯೋಗದ ಶಿಫಾರಸ್ಸು / ಅಭಿಪ್ರಾಯವನ್ನು ಪರಿಗಣಿಸಿ ಸರ್ಕಾರದ ಆದೇಶ ಸಂಖ್ಯೆ: ಇಪಿ 260 ಪಿಜಿಸಿ 2021, ದಿನಾಂಕ:26.07.2022ರಲ್ಲಿ ಶೈಕ್ಷಣಿಕ ವರ್ಷದ ಜೂನ್ 1ನೇ ದಿನಾಂಕಕ್ಕೆ ನಿಗದಿಪಡಿಸಿರುವ ವಯೋಮಿತಿಯನ್ನು ಮುಂದುವರೆಸುತ್ತಾ, ಕನಿಷ್ಟ 06 ವರ್ಷಗಳು ಪೂರ್ಣಗೊಂಡಿರುವ ಮಗುವನ್ನು ಒಂದನೇ ತರಗತಿಗೆ ದಾಖಲಿಸಲು ವಯೋಮಿತಿಯನ್ನು ನಿಗದಿಪಡಿಸಿ ಆದೇಶಿಸಿದೆ.

ಮುಂದುವರೆದು, ಕರ್ನಾಟಕ ಶಿಕ್ಷಣ ಅಧಿನಿಯಮ, 1983ರ ಕಲಂ 20ರಲ್ಲಿ ಸ್ಪಷ್ಟಪಡಿಸಿರುವಂತೆ "ಮಗುವಿನ ವಯಸ್ಸನ್ನು, ಶೈಕ್ಷಣಿಕ ವರ್ಷದ ಪ್ರಾರಂಭದ ದಿನದಂದು ಅಥವಾ ಅದಕ್ಕೆ ಮುಂಚೆ, ಆ ಮಗುವಿಗೆ ತುಂಬುವ ಪೂರ್ಣ ವರ್ಷಗಳನ್ನು ಆಧರಿಸಿ ಲೆಕ್ಕ ಹಾಕತಕ್ಕದ್ದು. ಶೈಕ್ಷಣಿಕ ವರ್ಷದ ಪ್ರಾರಂಭದ ದಿನವನ್ನಾಗಿ ಜೂನ್ ಒಂದನೇ ದಿನಾಂಕವನ್ನು ಪರಿಗಣಿಸತಕ್ಕದ್ದು.

ಪರಂತು, ಮಗುವಿನ ಜನ್ಮ ದಿನವು, ಶೈಕ್ಷಣಿಕ ವರ್ಷದ ಮೊದಲನೇ ದಿನಾಂಕದಿಂದ **ಅರವತ್ತು ದಿನಗಳೊಳಗೆ ಬರುವಲ್ಲಿ** ಮಗುವಿನ ವಯಸ್ಸನ್ನು ಲೆಕ್ಕ ಹಾಕುವ ಉದ್ದೇಶಕ್ಕಾಗಿ, ಮಗುವಿನ ಜನ್ಮ ದಿನಾಂಕವು ಶೈಕ್ಷಣಿಕ ವರ್ಷದ ಮೊದಲನೇ ದಿನಾಂಕದಂದು ಬರುವುದಾಗಿ ಭಾವಿಸತಕ್ಕದ್ದು.

ಅದರಂತೆ, 2026-27ನೇ ಶೈಕ್ಷಣಿಕ ಸಾಲಿಗೆ ಸೀಮಿತವಾಗಿ ಒಂದನೇ ತರಗತಿಗೆ ಮಕ್ಕಳನ್ನು ದಾಖಲು ಮಾಡಿಕೊಳ್ಳುವ ಸಂದರ್ಭದಲ್ಲಿ ಕರ್ನಾಟಕ ಶಿಕ್ಷಣ ಅಧಿನಿಯಮ, 1983ರ ಕಲಂ 20ರಲ್ಲಿ ಕಲ್ಪಿಸಿರುವ ಅವಕಾಶವನ್ನು ಪರಿಗಣಿಸಿ, **ಶೈಕ್ಷಣಿಕ ವರ್ಷದ ಜೂನ್ 1 ರಿಂದ ಗರಿಷ್ಟ 60(ಅರವತ್ತು) ದಿನಗಳ ಸಡಿಲಿಕೆಯನ್ನು ನೀಡಿ** ಮಗುವಿನ ವಯಸ್ಸನ್ನು ಲೆಕ್ಕಹಾಕಿ ಶಾಲಾ ದಾಖಲಾತಿಗೆ ಪರಿಗಣಿಸಲು ಆದೇಶಿಸಿದೆ.

..3..

Kiran Raghuppathi

ಈ ಆದೇಶವನ್ನು SATS(Student Achievement Tracking System) ತಂತ್ರಾಂಶದಲ್ಲಿ ಸೂಕ್ತ / ಅವಶ್ಯಕ ಬದಲಾವಣೆಗಳನ್ನು ಮಾಡಿಕೊಳ್ಳುವ ಷರತ್ತಿನೊಂದಿಗೆ ಕಟ್ಟುನಿಟ್ಟಾಗಿ ಅನುಷ್ಠಾನ ಮಾಡುವಂತೆ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ಮತ್ತು ಅಪರ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಕಲಬುರಗಿ ಮತ್ತು ಧಾರವಾಡ ಇವರಿಗೆ ನಿರ್ದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ವಿದ್ಯಾ ಹೆಚ್. ಪ್ರ)
ಸರ್ಕಾರದ ಅಧೀನ ಕಾರ್ಯದರ್ಶಿ
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ.
(ಪ್ರಾಥಮಿಕ)

10/4/26

ಇವರಿಗೆ:

ಸಂಕಲನಕಾರರು, ಕರ್ನಾಟಕ ರಾಜ್ಯ ವಿಶೇಷ ಪತ್ರ, ಬೆಂಗಳೂರುರವರಿಗೆ - ಸರ್ಕಾರದ ಈ ಆದೇಶವನ್ನು ಕರ್ನಾಟಕ ರಾಜ್ಯ ಪತ್ರದ ವಿಶೇಷ ಪತ್ರಿಕೆಯಲ್ಲಿ ಪ್ರಕಟಿಸಿ, ಪ್ರಕಟಿತ 100 ಪ್ರತಿಗಳನ್ನು ಸರ್ಕಾರಕ್ಕೆ ಒದಗಿಸುವಂತೆ ಕೋರಲಾಗಿದೆ.

ಇವರಿಗೆ:-

1. ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು.
2. ಅಪರ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಕಲಬುರಗಿ / ಧಾರವಾಡ.
3. ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಕರ್ನಾಟಕ, ಬೆಂಗಳೂರು.
4. ನಿರ್ದೇಶಕರು, ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ಇಲಾಖೆ(ಡಿ.ಎಸ್.ಇ.ಆರ್.ಟಿ.), ಬೆಂಗಳೂರು
5. ನಿರ್ದೇಶಕರು(ಪ್ರಾಥಮಿಕ), ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು/ಕಲಬುರಗಿ /ಧಾರವಾಡ.
6. ರಾಜ್ಯದ ಎಲ್ಲಾ ಉಪ ನಿರ್ದೇಶಕರು (ಆಡಳಿತ), ಶಾಲಾ ಶಿಕ್ಷಣ ಇಲಾಖೆ(ಆಯುಕ್ತರ ಮುಖಾಂತರ).
7. ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಶಾಲಾ ಶಿಕ್ಷಣ ಇಲಾಖೆ(ಸಂಬಂಧಪಟ್ಟ ಉಪ ನಿರ್ದೇಶಕರ ಮುಖಾಂತರ).
8. ಸಮನ್ವಯಾಧಿಕಾರಿ, ಇ-ಆಡಳಿತ ಘಟಕ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಬೆಂಗಳೂರು.
9. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

ಪ್ರತಿ ಮಾಹಿತಿಗಾಗಿ:

1. ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಹಾಗೂ ಸಕಾಲ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.

*****

Kiran Raghuppathi